**Publication**: Samyuktha Karnataka
**Date:** 20th Nov 2022

# ಶಿಕ್ಷಣ ಎಂದರೆ ಉದ್ಯೋಗ ಪಡೆಯುವ ಹಾದಿಯಲ್ಲ

ಬೆಂಗಳೂರು: ಶಿಕ್ಷಣ ಎಂದರೆ ಕೇವಲ ಉದ್ಯೋಗ ಪಡೆಯುವ ಹಾದಿ ಎಂಬಂತೆ ಬ್ರಿಟಿಷರು ಬಿಂಬಿಸಿದ್ದರು. ಆದರೆ ಕೇಂದ್ರ ಸರ್ಕಾರ ಜಾರಿ ಮಾಡಿರುವ ನೂತನ ರಾಷ್ಟ್ರೀಯ ಶಿಕ್ಷಣ ನೀತಿಯು ಇಂತಹ ಚಿಂತನೆಯನ್ನು ಬದಲಿಸಿ ಶಿಕ್ಷಣ ಸುಧಾರಣೆ ಮಾಡುತ್ತಿದೆ ಎಂದು ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಹೇಳಿದರು.



ಸಿಎಂಆರ್ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಇತ್ತೀಚೆಗೆ ದೇಶದಲ್ಲಿ ಸ್ವಾತಂತ್ರ್ಯದ ಅಮೃತ ಮಹೋತ್ಸವ ಆಚರಿಸಲಾಗಿದೆ. ಈ ಕಾಲದಲ್ಲಿ ಮುಂದಿನ ಪೀಳಿಗೆಗಾಗಿ ಉತ್ತಮ ಶಿಕ್ಷಣ ನೀಡುವುದು ಮಹತ್ತರ ಹೊಣೆಯಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಪ್ರಧಾನಿಗಳು ಹಾಗೂ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ಶಿಕ್ಷಣ ವ್ಯವಸ್ಥೆಯನ್ನು ಆಮೂಲಾಗ್ರವಾಗಿ ಸುಧಾರಣೆ ಮಾಡುತ್ತಿದ್ದಾರೆ. ಹೊಸ ರಾಷ್ಟ್ರೀಯ ಶಿಕ್ಷಣ ನೀತಿಯ ಮೂಲಕ ಹೊಸ ಸುಧಾರಣೆ ತರಲಾಗುತ್ತಿದೆ ಎಂದರು.

ಶಿಕ್ಷಣವನ್ನು ವಿಶಾಲ ದೃಷ್ಟಿಯಿಂದ ನೋಡುವ ಮತ್ತು 21 ನೇ ಶತಮಾನದ ಆಧುನಿಕ ಚಿಂತನೆಗಳೊಂದಿಗೆ ಬೆಸೆಯುವ ಉದ್ದೇಶವನ್ನು ರಾಷ್ಟ್ರೀಯ ಶಿಕ್ಷಣ ನೀತಿಯು ಹೊಂದಿದೆ. ಭಾರತದಲ್ಲಿ ಎಂದಿಗೂ ಪ್ರತಿಭಾವಂತರ ಕೊರತೆ ಉಂಟಾಗಲಿಲ್ಲ. ಆದರೆ ಶಿಕ್ಷಣವನ್ನು ಕೇವಲ ಉದ್ಯೋಗ ಪಡೆಯುವ ದಾರಿ ಎಂಬಂತೆ ಬಿಂಬಿಸಲಾಗಿದೆ. ಭಾರತೀಯ ಚಿಂತನೆ, ಪರಂಪರೆಯ ಬಗ್ಗೆ ಶಿಕ್ಷಣದಲ್ಲಿ ಚರ್ಚಿಸುವ ಮಹತ್ವವನ್ನು ಬ್ರಿಟಿಷರು ಮನಗಾಣಲಿಲ್ಲ. ಅವರು ಹೇರಿದ ಶಿಕ್ಷಣದಿಂದಾಗಿ ನಮ್ಮ ಪರಂಪರೆಯನ್ನು ಗುರುತಿಸಲು ಸಾಧ್ಯವಾಗಲಿಲ್ಲ. ಜ್ಞಾನ ಹಾಗೂ ಶಿಕ್ಷಣ ಬಹುರೂಪವನ್ನು ಹೊಂದಿದೆ. ವ್ಯಕ್ತಿತ್ವವನ್ನು ರೂಪಿಸುವುದೇ ಶಿಕ್ಷಣ ಎಂದು ಸ್ವಾಮಿ ವಿವೇಕಾನಂದರು ಹೇಳಿದ್ದರು ಎಂದರು.

ಇತ್ತೀಚೆಗೆ ಕನ್ನಡದ ಜನಪ್ರಿಯ ಚಿತ್ರ ಚಾರ್ಲಿ, ನಾಯಿ ಹಾಗೂ ಮಾನವನ ಸೂಕ್ಷ್ಮ ಬಾಂಧವ್ಯವನ್ನು ಸಮರ್ಥವಾಗಿ ತೋರಿಸಿತು. ಸಾಕುಪ್ರಾಣಿಗಳ ಜೊತೆಗೆ ಅವಿನಾಭಾವ ಸಂಬಂಧ ಹೊಂದಿದ ಅನುಭವ ನನಗೂ ಇದೆ. ಸಾಕುಪ್ರಾಣಿಗಳ ಜೊತೆಗೆ ಕಾಲ ಕಳೆಯುವಾಗ ಮನಸ್ಸು ಪ್ರಶಾಂತವಾಗಿರುತ್ತದೆ. ಜೆಕ್ ಲೇಖಕರಾದ ಮಿಲನ್ ಕುಂದೇರ ಅವರು ಹೇಳಿರುವಂತೆ, ನಾಯಿಗಳು ನಮ್ಮ ಸ್ವರ್ಗಕ್ಕೆ ಸೇತುವೆಯಾಗಿದೆ. ಅವುಗಳು ಯಾವುದೇ ಅಸೂಯೆ, ದ್ವೇಷ ಹೊಂದಿರುವುದಿಲ್ಲ ಎಂದರು. ಸಿಎಂಆರ್ ವಿಶ್ವವಿದ್ಯಾಲಯದ ಮುಖ್ಯಸ್ಥ ಕೆ.ಸಿ.ರಾಮಮೂರ್ತಿ ಮತ್ತಿತರರಿದ್ದರು.

Bangalore Edition
Nov 20, 2022 Page No. 7
Powered by : eReleGo.com